ಡಾ. ಎ.ಬಿ. ಮಾಲಕರಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ. ಸಧ್ಯಕ್ಕೆ ಇಲ್ಲ.

ಆ. ನರ್ಸಿಂಗ್ ಶಾಲೆಯ ಸ್ಥಾಪನೆ ಮೇಲಿನ ನಿಷೇಧ ತಾರೀಖು: 5.7.2003ರಂದು ತೆರವಾಗಲಿದೆ.

ಕುಂದಾಪುರ ತಾಲ್ಲೂಕಿನಲ್ಲಿ ಪಂಚಾಯತ್ ಕಾರ್ಯದರ್ಶಿಗಳ ಕೊರತೆ

1472(1525) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕುಂದಾಪುರ ತಾಲ್ಲೂಕಿನಲ್ಲಿ ಕೊರತೆ ಇರುವ ಪಂಚಾಯತಿ ಕಾರ್ಯದರ್ಶಿಗಳ ಸಂಖ್ಯೆ ಎಷ್ಟು?

ಆ. ಬೈಂದೂರು ವಿಧಾನಸಭಾ ಕ್ಷೇತ್ರದಲ್ಲಿ ಕೊರತೆ ಇರುವ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಸಂಖ್ಯೆ ಎಷ್ಟು?

ಇ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ. 17.

ಆ. 12

ಇ. ಹೌದು.

ಬೈಂದೂರುನಲ್ಲಿ ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆ

1473(1526) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. 1994-95 ರಲ್ಲಿ ಮಂಜೂರಾಗಿದ್ದ ಬೈಂದೂರು ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆ ತಡೆಹಿಡಿಯಲಾಗಿದ್ದು ಈ ಸಾಲಿನಲ್ಲಾದರೂ ಸ್ಥಾಪಿಸಬಹುದೇ;

ಆ. ಸಾರ್ವಜನಿಕರಿಗೆ ಅತೀ ಅಗತ್ಯವಿರುವ ಸಮುದಾಯ ಆರೋಗ್ಯ ಕೇಂದ್ರದ ಸ್ಥಾಪನೆಗೆ ಸರ್ಕಾರಕ್ಕಿರುವ ತೊಡಕುಗಳೇನು; (ವಿವರ ನೀಡುವುದು)

ಇ. ಇದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ. ಪ್ರಸುತ ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದಿಲ್ಲ.

ಆ. ಪೂರ್ಣ ಪ್ರಮಾಣದ ಸೂಕ್ತ ಪ್ರಸ್ತಾವನೆ ಜಿಲ್ಲಾ ಪಂಚಾಯಿತಿಯಿಂದ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು.

ಇ. ಉದ್ಭವಿಸುವುದಿಲ್ಲ.

ಪಾರದರ್ಶಕ ಕಾಯಿದೆಯ ಉಲ್ಲಂಘನೆ

1774(1988) ಶ್ರೀ ಗುಂಡಪ್ಪ ವಕೀಲ್ (ಜೀರಾದ್): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?